| | |
|---|---|
| ಶ್ರೀ ಭಗವಾನ್ ಮಹಾವೀರ್ ಜೈನ್ ಕಾಲೇಜು<br>ವಿ.ವಿ. ಪುರಂ, ಬೆಂಗಳೂರು–04<br>ಅಣಕು ಪರೀಕ್ಷೆ ಪತ್ರಿಕೆ–2(Mock Exam) ಜನವರಿ 2020 | **Course:** ದ್ವಿತೀಯ ಪಿ.ಯು.ಸಿ<br>**Subject:** ಕನ್ನಡ<br>**Max. Marks:** 100 ಅಂಕಗಳು<br>**Duration:** 3 ಗಂಟೆ 15 ನಿಮಿಷಗಳು |

**ಅ–ವಿಭಾಗ**

**I. ಈ ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣವಾಕ್ಯದಲ್ಲಿ ಉತ್ತರಿಸಿ: (1x10=10)**

1. ಉರಿಲಿಂಗಪೆದ್ದಿಯ ವಚನಗಳ ಅಂಕಿತ ಯಾವುದು?
2. ಬ್ಯಾಸಗಿ ದಿವಸಕ್ಕೆ ಯಾವ ಮರ ತಂಪು?
3. ಹತ್ತಿಯ ಬೀಜಕ್ಕೆ ಯಾವುದು ತಪ್ಪದ ಕರ್ಮ?
4. ಕವಯಿತ್ರಿ ಯಾರಲ್ಲಿ ಮೊರೆ ಇಡುತ್ತಾರೆ?
5. ಸ್ಥಳೀಯ ಭಾಷೆ ಕಲಿಯದ ಅನ್ಯಭಾಷಿಕರು ಏನಾಗುತ್ತಾರೆ?
6. ಧಣಿಗಳ ಹೆಸರೇನು?
7. ಲೇಖಕರು ಹೇಳುವ ಹಳ್ಳಿಯ ಹೋಟೇಲಿನ ಹೆಸರೇನು?
8. ಆನೆಗೆ ಜಗದ್ಗುರುಗಳನ್ನು ಹೊರುವ ಕೆಲಸ ತಪ್ಪಿಹೋದುದೇಕೆ?
9. ನಿರೂಪಕರ ಪ್ರಕಾರ ಮುನ್ಸಿಪಾಲಿಟಿ ಪ್ರೆಸಿಡೆಂಟರ ಕರ್ತವ್ಯ ಯಾವುದು?
10. ಆನೆಶಾಸ್ತ್ರದವನು ಏನೆಂದು ಭವಿಷ್ಯ ನುಡಿದಿದ್ದನು?

**ಆ–ವಿಭಾಗ**

**II. ಇವುಗಳಲ್ಲಿ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. (2x4=8)**

11. ಯಾವಾಗ ನಿಲಬಹುದು? ಯಾವಾಗ ನಿಲಲಾಗದು?
12. ಶುಚಿ ಮತ್ತು ಸ್ವಾದಗಳನ್ನು ಕುರಿತು ಸೋಮನಾಥನ ಅಭಿಪ್ರಾಯವೇನು?
13. ಯಾರಿಗೆ ತತ್ವಜ್ಞಾನ ಹೇಳಿ ಪ್ರಯೋಜನವಿಲ್ಲ?
14. ಶಿಲುಬೆಗೇರಿಸಿದವರ ಗುಣಗಳು ಇಂದು ಯಾವ ವೇಷ ತಾಳಿವೆ?
15. ಮುದುಕಿಯು ಯಾರನ್ನು ಏನೆಂದು ಪ್ರಾರ್ಥಿಸುವಳು?

**(ಆ) ಇವುಗಳಲ್ಲಿ ಯಾವುದಾದರೂ ಮೂರು–ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. (2x3=6)**

16. ಸಿಂಹಬಾಲದ ಕೋತಿಗಳಿಗೆ ಒದಗಿದ ತೊಂದರೆ ಏನು?
17. ಸೀತಾಳ ಓದುವ ಆಸಕ್ತಿ ಹೇಗಿತ್ತು?
18. ಕಲಾಂ ಮೇಷ್ಟ್ರು ಹೇಳಿದ ಯಶಸ್ಸಿನ ಪಂಚಾಕ್ಷರಿ ಮಂತ್ರ ಯಾವುದು?
19. ಮುದ್ದಣನನ್ನು ಮನೋರಮೆ ಹೇಗೆ ಉಪಚರಿಸಿದಳು?

**(ಇ) ಇವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. (2x3=6)**

20. ಆನೆ ಸಾಕುವುದರ ಬಗ್ಗೆ ಜನರ ನಂಬಿಕೆ ಏನಾಗಿತ್ತು?
21. ಫಾರೆಸ್ಟ್ ಡಿಪಾರ್ಟ್‌ಮೆಂಟಿನವರ ನಂಬರ್ ಒನ್ ಎನಿಮಿಗಳು ಯಾರು ಯಾರು?
22. ನಾಯನ್ನು ಕೊಲ್ಲದೆ ನೌಕರರು ಸುಳ್ಳು ಹೇಳಿರುವರೆಂದು ನಿರೂಪಕರು ಯಾವ ಸಲಹೆ ನೀಡಿದರು?
23. ಅರಣ್ಯ ಇಲಾಖೆಯವರು ನಾಗರಾಜನನ್ನು ಕುರಿತು ಏನೆಂದು ಜಾಹೀರಾತು ನೀಡಿದರು?

**ಇ–ವಿಭಾಗ**

**III. (ಅ) ಇವುಗಳಲ್ಲಿ ಯಾವುದಾದರೂ ಎರಡನ್ನು ಕುರಿತು ಸಂದರ್ಭಸೂಚಿಸಿ, ಸ್ವಾರಸ್ಯ ವಿವರಿಸಿ. (3x2=6)**

24. ಆಪತ್ತಿನೊಳ್ ಮಣಿದುಂ ನೋಡದ ಬಂಧುವೇತಕೆ
25. ಬಂಗಾರ ನಿನಗ ಸ್ಥಿರವಲ್ಲ
26. ಬಟ್ಟೆಯಲ್ಲಿ ಮೈ ತುರುಕಿ ಓಡುವುದು.

**(ಆ) ಇವುಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ. (3x1=3)**

27. ಮೂರು ಬೇಸಿಗೆಯವರೆಗೆ ಚಿನ್ನಮ್ಮನ ದುಡಿತಕ್ಕೆ ಪಡಿಯಿಲ್ಲ.
28. ನನ್ನ ದೃಷ್ಟಿಯಲ್ಲಿ ವಾರ್ತಾ ಇಲಾಖೆ ಇದ್ದಂತೆ.

**(ಇ) ಇವುಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ವಿವರಿಸಿ.** **(3x1=3)**

29. ಈ ಕಂಬದೊಳ್ಗೆ ಏನೋ ಸೇರ್ ಕೊಂಡಿದೆ.
30. ಕೋವಿ ಸಿಕ್ಕಿದೆ ಆದರೆ ಹೆಣ ಸಿಗಲಿಲ್ಲ.

**ಈ–ವಿಭಾಗ**

**IV. ಇವುಗಳಲ್ಲಿ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿ:** **(4x3=12)**

31. ರಾವಣನು ಬಹುರೂಪಿಣೀ ವಿದ್ಯೆಯನ್ನು ಒಲಿಸಿಕೊಂಡ ಸಂದರ್ಭವನ್ನು ವಿವರವಾಗಿ ಬರೆಯಿರಿ.
32. ತನಗಾದ ಅವಮಾನವನ್ನು ದ್ರೌಪದಿ ಭೀಮನಿಗೆ ಹೇಳಿಕೊಂಡ ಬಗೆಯನ್ನು ವಿವರಿಸಿ.
33. ಮಾನವನ ಜೀವನದ ಸಾರ್ಥಕತೆ ಎಲ್ಲಿದೆಯೆಂದು ಕವಿ ಬೇಂದ್ರೆ ಹೇಳಿದ್ದಾರೆ?
34. ನಗರ ಜೀವನದ ಯಾಂತ್ರಿಕ ವಿವರಗಳು ಕವಿತೆಯಲ್ಲಿ ಹೇಗೆ ಚಿತ್ರಿತಗೊಂಡಿದೆ ವಿವರಿಸಿ.

**(ಆ) ಇವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿರಿ.** **(4x2=8)**

35. ಬಸಲಿಂಗ ಕೊನೆಯಲ್ಲಿ ತೆಗೆದುಕೊಂಡ ನಿರ್ಧಾರ ಯಾವುದು? ಅದಕ್ಕೆ ಕಾರಣಗಳೇನು?
36. ತಾಯಿ–ತಂದೆ, ಶಿಕ್ಷಕರು ಸೇರಿ ಆದ ತ್ರಿಭುಜವೇ ಉತ್ತಮ ಬದುಕಿಗೆ ಆದರ್ಶ ಮಾದರಿ ಹೇಗೆ? ವಿವರಿಸಿ.
37. ಮುದ್ದಣ ಅರಮನೆಯಿಂದ ಬಂದ ಪರಿಯನ್ನು ಮನೋರಮೆಯ ಉಪಚಾರವನ್ನೂ ವಿವರಿಸಿ.

**(ಇ) ಇವುಗಳಲ್ಲಿ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿರಿ.** **(4x2=8)**

38. ಕೃಷ್ಣೇಗೌಡನ ಆನೆ ಹುಟ್ಟಿ ಬೆಳೆದ ಬಗೆಯನ್ನು ವಿವರಿಸಿ. ಅದು ಪೇಟೆಯಲ್ಲಿ ಏನು ಮಾಡುತ್ತಿತ್ತು.
39. ಡ್ರೈವರ್ ಅಬ್ಬಾಸ್ ಮತ್ತು ಕ್ಲೀನರ್ ಕೃಷ್ಣನ ಸಾವಿಗೆ ಕೃಷ್ಣೇಗೌಡರ ಆನೆ ಕಾರಣವೆ ವಿವರಿಸಿ.
40. ನಾಗರಾಜನ ನಿಗೂಢ ಸಾವಿನ ಬಗ್ಗೆ ಜನರ ಅಭಿಪ್ರಾಯಗಳೇನು?

**ಉ–ವಿಭಾಗ**

**V. ಇವುಗಳಲ್ಲಿ ಒಂದು ಪದ್ಯದ ಭಾವವನ್ನು ವಿವರಿಸಿ.** **(5x1=5)**

41. ಕದಡಿದ ಸಲಿಲಂ ತಿಳಿವಂ
ದದೆ ತನ್ನಿಂ ತಾನೆ ತಿಳಿದ ದಶವದನಂಗಾ
ದುದು ವೈರಾಗ್ಯಂ ಸೀತೆಯೊ
ಳುದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ

42. ಇನ್ನು ಹುಟ್ಟದೆಯಿರಲಿ ನಾರಿಯ
ರೆನ್ನವೊಲು ಭಂಗಿತರು ಭುವನದೊ
ಳಿನ್ನು ಜನಿಸಲುಬೇಡ ಗಂಡರು ಭೀಮಸನ್ನಿಭರು
ಎನ್ನವೊಲು ಪಾಂಡವರವೊಲು ಸಂ
ಪನ್ನ ದುಃಖಿಗಳಾರು ನವೆದರು
ಮುನ್ನಿನವರೊಳಗೆಂದು ದ್ರೌಪದಿ ಹಿರಿದು ಹಲುಬಿದಳು.

**ಭಾಷಾಭ್ಯಾಸ:–**

**VI. (ಅ) ಈ ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ:–** **(2x6=12)**

43. ಈ ಪದಗಳ ಅರ್ಥ ಬರೆಯಿರಿ.

(1) ಹರಿಬ (2) ಪೊನ್ನು

44. ಈ ಪದಗಳ ನಾನಾರ್ಥ ಬರೆಯಿರಿ.

(1) ಬಗೆ (2) ರಾಗ

45. ಈ ಕೆಳಗಿನ ಕ್ರಿಯಾ ಪದಗಳಲ್ಲಿ 'ಧಾತು' ಗುರುತಿಸಿರಿ.

(1) ಕಟ್ಟಿಸು (2) ಎದ್ದರು

46. ಈ ನುಡಿಗಟ್ಟುಗಳನ್ನು ಸ್ವಂತ ವಾಕ್ಯದಲ್ಲಿ ಬಳಸಿ ಬರೆಯಿರಿ.

(1) ರಾಮಬಾಣ (2) ಹಿತ್ತಾಳೆಕಿವಿ

47. ಈ ಪದಗಳಿಗೆ ತದ್ಭವ ರೂಪವನ್ನು ಬರೆಯಿರಿ.

(1) ಘೂಕ (2) ಪರೀಕ್ಷಿಸು.

48. ಈ ಕೆಳಗಿನ ಪದಗಳಲ್ಲಿನ ಗುಣವಾಚಕಗಳನ್ನು ಗುರುತಿಸಿ.

(1) ಹೆಮ್ಮರ (2) ಗಟ್ಟಿಪಾದ.

49. ಇವುಗಳ ವಿಭಕ್ತಿ ಪ್ರತ್ಯಯಗಳನ್ನು ಗುರುತಿಸಿ. ಹೆಸರಿಸಿರಿ.

(1) ಧರೆಯೊಳ್ (2) ರಾವಣನೇ

**(ಆ) ಇವುಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧ ಬರೆಯಿರಿ. (5x1=5)**

50. ಹೆಚ್ಚುತ್ತಿರುವ ವೃದ್ಧಾಶ್ರಮಗಳು

51. ವಿದೇಶಿ ವ್ಯಾಮೋಹ ಮತ್ತು ಪ್ರತಿಭಾ ಪಲಾಯನ.

**(ಇ) ಇವುಗಳಲ್ಲಿ ಯಾವುದಾದರೂ ಒಂದು ವಿಷಯದ ಬಗ್ಗೆ ಪತ್ರ ಬರೆಯಿರಿ. (4x1=4)**

52. ನಿಮ್ಮ ಕಾಲೇಜಿನ ಶೈಕ್ಷಣಿಕ ಪ್ರವಾಸಕ್ಕೆ ಅನುಮತಿ ಕೋರಿ ನಿಮ್ಮ ತಂದೆಯವರಿಗೆ ಪತ್ರ ಬರೆಯಿರಿ.

53. ಸಮರ್ಪಕ ವಿದ್ಯುತ್ ಪೂರೈಕೆಗಾಗಿ ಸಂಬಂಧಿಸಿದ ಇಲಾಖಾ ಮುಖ್ಯಸ್ಥರಿಗೆ ಪತ್ರವೊಂದನ್ನು ಬರೆಯಿರಿ.

**(ಈ) ಈ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿರಿ. (4x1=4)**

54. ಸಂತೆಯ ಹೊತ್ತಿಗೆ ಮೂರು ಮೊಳ ನೇಯ್ದಂತೆ.

55. ಹಣಕ್ಕಿಂತ ಗುಣ ಮುಖ್ಯ.

*****